ಜೆಎಸ್‌ಎಸ್ ಮಹಾವಿದ್ಯಾಪೀಠ

**ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು**

(ಸ್ವಾಯತ್ತ)

**ಬಿ.ಎನ್. ರಸ್ತೆ, ಮೈಸೂರು – 570 025**

ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

Ph: 0821-2548236 & 2548380. FAX: 0821-2548238 E-mail: jssautonomous@gmail.com Website: JSSCACS.edu.in

ಸಂಖ್ಯೆ: ಜೆಎಸ್‌ಎಸ್‌ಸಿಎಂ/ ದಿನಾಂಕ: 27.09.2017

## ಪ್ರಕಟಣೆಯ ಕೃಪೆಗಾಗಿ

### "ಒಂದು ಶಿಕ್ಷಣ ಸಂಸ್ಥೆ ನೂರು ದೇವಾಲಯಗಳಿಗೆ ಸಮ"

– ಡಾ. ಕೆ.ಎಸ್. ರಂಗಪ್ಪ

ಮೈಸೂರು ಸೆ. 27 : ಬಿ.ಎನ್. ರಸ್ತೆ ಜೆಎಸ್‌ಎಸ್ ಕಾಲೇಜಿನ ವಿವಿಧ ಸ್ನಾತಕೋತ್ತರ ಪದವಿಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿಗಳಾದ ಡಾ. ಕೆ.ಎಸ್. ರಂಗಪ್ಪನವರು ಮಾತನಾಡುತ್ತಾ 'ಇಂದಿನ ಸ್ಪರ್ಧಾಯುಗದಲ್ಲಿ ಮಾನವೀಯ ಮೌಲ್ಯಗಳೊಡನೆ ತಮ್ಮ ಅಧ್ಯಯನದ ವಿಷಯದಲ್ಲಿ ನಿರಂತರ ಸಂಶೋಧನೆಯಲ್ಲಿ ತೊಡಗಿದರೆ ಮಾತ್ರ ಉದ್ಯೋಗ ಕ್ಷೇತ್ರದಲ್ಲಿ ಅವಕಾಶಗಳನ್ನು ಗಿಟ್ಟಿಸಿಕೊಳ್ಳಬಹುದು. ಇದಕ್ಕೆ ಪೂರಕವಾಗುವಂತೆ ಜೆಎಸ್‌ಎಸ್ ಮಹಾವಿದ್ಯಾಪೀಠದ ಅಡಿಯಲ್ಲಿ ನಡೆಸಲಾಗುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಉತ್ತಮವಾದ ಮೂಲಭೂತ ಸೌಲಭ್ಯಗಳು ಹಾಗೂ ಸಂಶೋಧನೆ ನಡೆಸಲು ಉತ್ತಮವಾದ ಪ್ರಯೋಗಾಲಯಗಳು ವಿಶ್ವವಿದ್ಯಾನಿಲಯಗಳಲ್ಲಿ ಇರುವ ಮಟ್ಟದಲ್ಲಿಯೇ ಇವೆ. ಇಂದಿನ ವಿದ್ಯಾರ್ಥಿಗಳು ಈ ಎಲ್ಲಾ ಸೌಕರ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮವಾಗಿ ಅಧ್ಯಯನ ನಿರತರಾಗಬೇಕೆಂದು ಕರೆ ನೀಡಿದರು. ಮುಂದುವರೆದು ಮಾತನಾಡುತ್ತಾ, ಒಂದು ಶಿಕ್ಷಣ ಸಂಸ್ಥೆ ನೂರು ದೇವಾಲಯಗಳಿಗೆ ಸಮ ಎಂದರು. ನಮ್ಮ ದೇಶ ಮತ್ತು ರಾಜ್ಯದಲ್ಲಿ ಒಂದೊಂದು ವಿಷಯಕ್ಕೆ ಒಂದೊಂದು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸುವ ಬದಲು ಎಲ್ಲಾ ವಿಷಯಗಳನ್ನು ಒಳಗೊಂಡಂತೆ ಒಂದೇ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಿದಾಗ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ' ಎಂದು ಅಭಿಪ್ರಾಯಪಟ್ಟರು. ಸುತ್ತೂರು ಶ್ರೀಮಠ ಈ ನಿಟ್ಟಿನಲ್ಲಿ ಉತ್ತಮ ಗುಣಮಟ್ಟವುಳ್ಳ ಶಿಕ್ಷಣ ಸಂಸ್ಥೆಗಳನ್ನು ನಡೆಸುತ್ತಿದ್ದು ಈ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ನೀವುಗಳು ಪುಣ್ಯಶಾಲಿಗಳು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮೈಸೂರು ವಿಶ್ವವಿದ್ಯಾನಿಲಯ ಕಾಲೇಜು ಅಭಿವೃದ್ಧಿ ಮಂಡಳಿಯ ನಿರ್ದೇಶಕರಾದ ಡಾ. ಎಸ್. ಶ್ರೀಕಂಠಸ್ವಾಮಿಯವರು ವಿದ್ಯಾರ್ಥಿಗಳನ್ನು ಕುರಿತು ಮಾತನಾಡುತ್ತಾ, ಇಂದಿನ ವಿದ್ಯಾರ್ಥಿಗಳು ಜೀವನದಲ್ಲಿ ಸಚ್ಚಾರಿತ್ರ್ಯವುಳ್ಳ ವ್ಯಕ್ತಿಗಳನ್ನು ಮಾದರಿಯಾಗಿಟ್ಟುಕೊಂಡು ಮುಂದುವರೆಯಬೇಕೆಂದು ತಿಳಿಸುತ್ತಾ ವಿದ್ಯಾರ್ಥಿಗಳಿಗೆ ಓದುವುದು ಮತ್ತು ಬರೆಯುವುದು ಮೊಬೈಲ್ ಬಳಕೆಗಿಂತ ಅತಿ ಮುಖ್ಯ ಎಂದು ತಿಳಿಸಿದರು.

ಆರಂಭದಲ್ಲಿ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಪ್ರಾಸ್ತಾವಿಕವಾಗಿ ಕಾಲೇಜಿನ ಸಾಧನೆಗಳ ಬಗ್ಗೆ ವಿವರಿಸಿ ಕಾಲೇಜಿನ ಸಂಕ್ಷಿಪ್ತ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ಪರಿಚಯಿಸಿದರು.

ಕಾಲೇಜಿನ ಪ್ರಾಚಾರ್ಯರಾದ ಪ್ರೊ. ಎಂ. ಮಹದೇವಪ್ಪನವರು ಅತಿಥಿಗಳನ್ನು ಸ್ವಾಗತಿಸಿದರು. ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ. ಟಿ.ಡಿ. ಸುಬ್ಬಣ್ಣನವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಸ್ನಾತಕೋತ್ತರ ಸಮಾಜಕಾರ್ಯ ವಿಭಾಗದ ಮುಖ್ಯಸ್ಥರಾದ ಡಾ. ಎಂ.ಪಿ. ಸೋಮಶೇಖರ್‌ರವರು ವಂದಿಸಿದರು. ಕು. ಲಾಸ್ಯ ಪ್ರಾರ್ಥಿಸಿದರು. ಡಾ. ಬಿ.ವಿ. ಲತಾ ಕಾರ್ಯಕ್ರಮವನ್ನು ನಿರೂಪಿಸಿದರು.

(ಪ್ರೊ. ಎಂ. ಮಹದೇವಪ್ಪ)
**ಪ್ರಾಂಶುಪಾಲರು**

ಗೆ

ಸಂಪಾದಕರು / ವರದಿಗಾರರು

– – – – – – – – – – – – –

– – – – – – – – – – – – –